**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ತಿ.ನರಸೀಪುರ.**

**ಸಿ.ಸಿ ಸಂಖ್ಯೆಃ1822/2022 ಪಿಡಬ್ಲೂಃ 01**

ದಿನಾಂಕಃ **13.07.2023** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ಪಿರ್ಯಾದುದಾರರ ಪರ ಶ್ರೀ **ಬಿ.ಎಂ.ಎನ್** ವಕೀಲರಿಂದಃ

ನಾನು ಈ ಪ್ರಕರಣದಲ್ಲಿ ಪಿರ್ಯಾದುದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸರಿ ಇರುತ್ತದೆ ಹಾಗೂ ಅದನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದಕ್ಕೆ ನಾನು ಸಹಿ ಮಾಡಿರುತ್ತೇನೆ.

ದಿಃ **09.11.2021** ರ ಚೆಕ್ಕಿನ ಸಂಖ್ಯೆಃ **976158** ಹಾಜರು ಪಡಿಸಿದ್ದು, ಅದನ್ನು **ನಿಪಿ-1** ಎಂದು ಗುರುತಿಸಲಾಯಿತು. **ನಿಪಿ-1** ರಲ್ಲಿರುವ ಆರೋಪಿತನ ಸಹಿಯನ್ನು **ನಿಪಿ-1 ಎ** ಎಂದು ಗುರುತಿಸಲಾಯಿತು. ಬ್ಯಾಂಕಿನವರು ದಿಃ **27.01.2022** ರಂದು ಹಣ ಸಾಲದು ಎಂದು ನೀಡಿದ ಹಿಂಬರಹವನ್ನು ಹಾಜರು ಮಾಡಿದ್ದು ಅದನ್ನು **ನಿಪಿ-2** ಎಂದು ಗುರುತಿಸಲಾಯಿತು.

ವಕೀಲರ ಮುಖಾಂತರ ಆರೋಪಿಗೆ ದಿಃ **09.02.2022** ರ ಆರ್.ಪಿ.ಎ.ಡಿ ಮುಖಾಂತರ ಕಳುಹಿಸಿಕೊಟ್ಟ ಕಾನೂನು ನೋಟಿಸಿನ ಕಛೇರಿ ಪ್ರತಿ ಹಾಜರು ಮಾಡಿದ್ದು, ಅದನ್ನು **ನಿಪಿ-3** ಎಂದು ಗುರುತಿಸಲಾಯಿತು. ಅಂಚೆಯ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು **ನಿಪಿ-4** ಎಂದು ಗುರುತಿಸಲಾಯಿತು. ಆರೋಪಿಗೆ ನೋಟಿಸ್ ತಲುಪಿರುವ ಬಗ್ಗೆ ಅಂಚೆ ಕಛೇರಿಯವರು ನೀಡಿದ ಹಿಂಬರಹವನ್ನು ಹಾಜರು ಪಡಿಸಿದ್ದು, ಅದನ್ನು **ನಿಪಿ-5** ಎಂದು ಗುರುತಿಸಲಾಯಿತು. ಫಿರ್ಯಾದಿ ನೀಡಿರುವ ನೋಟಿಸ್‌ಗೆ ಆರೋಪಿಯು ದಿಃ **28.02.2022** ರಂದು ನೀಡಿರುವ ಪ್ರತ್ಯುತ್ತರ ನೋಟಿಸ್‌ನ್ನು **ನಿಪಿ-6** ಎಂದು ಗುರುತಿಸಲಾಯಿತು.ಆರೋಪಿತನ ವಿರುದ್ಧ ಕ್ರಮ ತೆಗೆದುಕೊಳ್ಳಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟಿ ಸವಾಲುಃ** ಆರೋಪಿ ಪರ ವಕೀಲರು ಪಾಟಿಸವಾಲಿಗೆ ಸಮಯಕೋರಿದ್ದು ಪಾಟೀ ಸವಾಲಿಗೆ ಸಮಯ ನೀಡಲಾಯಿತು.

ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.

ಓ ಹೇ ಕೆ ಸರಿ ಇದೆ.

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**

**ನ್ಯಾಯಾಲಯ ತಿ.ನರಸೀಪುರ.**